<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.</u> PW-2

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿನಾಂಕ 01.08.2025

<u>ಪಾಟೀ ಸವಾಲುಃ ಪ್ರತಿವಾದಿ ಸಂಖ್ಯೆ **4** ಮತ್ತು **5** ರವರ ಪರ ವಕೀಲರಿಂದಃ</u>

ನಾನು ದಾವಾ ಸ್ವತ್ತಿನ ದಾಖಲೆಗಳನ್ನು ನೋಡಿರುವುದಿಲ್ಲ. ಅದು ಯಾರ ಹೆಸರಿನಲ್ಲಿ ಇರುತ್ತದೆ ಎಂದು ನಿಮಗೆ ಗೊತ್ತಿರುವುದಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅದು ದಾಸೇಗೌಡರ ಹೆಸರಿನಲ್ಲಿ ಇರುತ್ತದೆ ಎಂದು ನುಡಿಯುತ್ತಾರೆ.

ಕೊಮ್ಮೇಬೋರೆಗೌಡರ ಮಗ ರಾಜುರವರು ದಾವಾ ಸ್ವತ್ತಿನಲ್ಲಿ ಮಳಿಗೆಗಳನ್ನು ಕಟ್ಟಿಕೊಂಡು ಹಾಗೂ ವ್ಯವಸಾಯ ಮಾಡಿಕೊಂಡು ಸ್ವಾಧೀನದಲ್ಲಿ ಇರುತ್ತಾರೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಸ್ವಾಧೀನದಲ್ಲಿ ಇಲ್ಲ ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣೆಯ 2 ನೇ ಪ್ಯಾರಾದಲ್ಲಿ ತಿಳಿಸಿರುವ ಸ್ವತ್ತು ಪ್ರಸ್ತುತ ಯಾರ ಹೆಸರಿನಲ್ಲಿ ಇರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಚಲುವೆಶೆಟ್ಟಿ ಹಾಗೂ ನರಸಿಂಹಶೆಟ್ಟಿರವರ ಹೆಸರಿನಲ್ಲಿ ಇರುತ್ತದೆ ಎಂದು ನುಡಿಯುತ್ತಾರೆ. ಈ ಸ್ವತ್ತಿನ ಪೂರ್ವಕ್ಕೆ ಸುಬ್ಬೇಗೌಡರ ರಾಗಿ ಮಿಲ್ ಇರುತ್ತದೆ, ಪಶ್ಚಿಮಕ್ಕೆ ಜುವಾರಿ ಸಂಸ್ಥೆಗೆ ಸೇರಿದ ಜಾಗ ಇರುತ್ತದೆ, ಉತ್ತರಕ್ಕೆ ಜುವಾರಿ ಸಂಸ್ಥೆಗೆ ಸೇರಿದ ಜಾಗ, ದಕ್ಷಿಣಕ್ಕೆ ಕೆ.ಆರ್.ಸಾಗರ ಮುಖ್ಯ ರಸ್ತೆ ಇರುತ್ತದೆ. ವೆಲ್ಡಿಂಗ್ ಕೆಲಸವನ್ನು ಮಳಿಗೆಯಲ್ಲಿ ಮಾಡಲು ನಾನು ಲೈಸೆನ್ಸ್ ಪಡೆದುಕೊಂಡಿರುತ್ತೇನೆ. ನರಸಿಂಹರವರು ಯಾರ ವಿರುದ್ಧ ಏತಕ್ಕಾಗಿ ದಾವೆ ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿರುತ್ತದೆ. 3 ಗುಂಟೆ ಜಾಗ ಇದೆ ಎಂದು ವಾದಿ ದಾವೆ ಸಲ್ಲಿಸಿರುತ್ತಾರೆ.

ನಿಮ್ಮನ್ನು ಸಾಕ್ಷಿ ಹೇಳಲು ನರಸಿಂಹರವರೇ ಕರೆದುಕೊಂಡು ಬಂದಿರುತ್ತಾರೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ವಾದಿಹೇಳಿದಂತೆ ನಾನು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಾವೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇರದಿದ್ದರೂ ಸಹಾ ವಾದಿಯ ಮಾತನ್ನು ಕೇಳಿ ಅವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ರಾಜು ಮತ್ತು ಅವರ ಕುಟುಂಬದವರು ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **1** ರಿಂದ **3** ನೇ ಪ್ರತಿವಾದಿ ಪರ ವಕೀಲರಿಂದಃ</u>

1 ರಿಂದ 3 ನೇ ಪ್ರತಿವಾದಿ ಪರ ವಕೀಲರು ಗೈರು ಹಾಜರಾಗಿದ್ದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.